# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ

# ನ್ಯಾಯಾಲಯ, ಕೊಪ್ಪಳ

**ಅಧಿಸೂಚನೆ ಸಂಖ್ಯೆ- 02/2022 ದಿನಾಂಕಃ 01/04/2022.**

| | |
|---|---|
| ವಿಷಯಃ | ಶೀಘ್ರಲಿಪಿಗಾರ, ಬೆರಳಚ್ಚುಗಾರ ಮತ್ತು ಜವಾನರ ಹುದ್ದೆಗಳ ನೇರ ನೇಮಕಾತಿ ಕುರಿತು. |
| ಉಲ್ಲೇಖಃ 1. | ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: DJA-II (LCA-II)-128/2012, ದಿನಾಂಕ 13.02.2017, 18-09-2018, 07-12-2018. |
| 2. | ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: DJA-II 321/2019, ದಿನಾಂಕ 19.03.2020. |
| 3. | ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: DJA-II 400/2021, ದಿನಾಂಕ 06.08.2021. |
| 4. | Karnataka Government Notification No. LAW 166 LAC 2015, Dated 06-03-2021. |
| 5. | ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ 2013 ಮತ್ತು ತಿದ್ದುಪಡಿ ಹಾಗೂ ಸಂಭಂಧಿಸಿದ ಆದೇಶಗಳು. |
| 6. | ಕರ್ನಾಟಕ ಅಧೀನ ನ್ಯಾಯಾಲಯ (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 (ತಿದ್ದುಪಡಿ) ನಿಯಮಗಳು, 2007 ಮತ್ತು 2021. |

......

ಮೇಲ್ಕಂಡ ಉಲ್ಲೇಖಗಳನ್ವಯ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೊಪ್ಪಳ ಘಟಕದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರ ಮತ್ತು ಬೆರಳಚ್ಚುಗಾರರ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅರ್ಹ ಹಾಗೂ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ON-LINE ಮೂಲಕ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಆನ್‌ಲೈನ್ ಮುಖಾಂತರ ಸಲ್ಲಿಸಲು ಪ್ರಾರಂಭಿಸುವ **ದಿನಾಂಕಃ- 01.04.2022** ರಿಂದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ***ದಿನಾಂಕಃ 21.04.2022 ರ (ರಾತ್ರಿ, 11-59 ರವರೆಗೆ)***

ಕೊಪ್ಪಳ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್

***http://districts.ecourts.gov.in/koppal-onlinerecruitment***

**OR**

http://karnatakajudiciary.kar.nic.in/districtrecruitment.php

ಹಾಗೂ

ಶುಲ್ಕವನ್ನು ಚಲನ್ ಮುಖಾಂತರ ಭಾರತೀಯ ಸ್ಟೇಟ್ ಬ್ಯಾಂಕ್ ಶಾಖೆಯಲ್ಲಿ ಪಾವತಿಸಲು ದಿನಾಂಕಃ ***22.04.2022*** ಕೊನೆಯ ದಿನಾಂಕವಾಗಿರುತ್ತದೆ.

## I. ಹುದ್ದೆಯ ಪದನಾಮ ಃ ಶೀಘ್ರಲಿಪಿಗಾರರ ಖಾಲಿ ಹುದ್ದೆಗಳ ಸಂಖ್ಯೆ ಃ 05

ವೇತನ ಶ್ರೇಣಿ ಃ 27650-650-29600-750-32600-850-36000-950-39800
-1100-46400-1250-52650 ಮತ್ತು ಇತರೆ ಭತ್ಯೆಗಳು.

ಹೈದರಾಬಾದ್-ಕರ್ನಾಟಕ ಸ್ಥಳೀಯ ವೃಂದಕ್ಕೆ ಹುದ್ದೆಗಳ ವರ್ಗೀಕರಣ

Hyderabad Karnataka Local Cadre)

| ವರ್ಗೀಕರಣ | ಇತರೆ | ಮಹಿಳೆ | ಗ್ರಾಮೀಣ | ಅಂಗವಿಕಲ | ಕನ್ನಡ ಮಾಧ್ಯಮ | ಮಾಜಿ ಸೈನಿಕ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|---|
| ಪರಿಶಿಷ್ಟ ಜಾತಿ | 1 | - | 1 | - | - | - | - | 2 |
| ಪ್ರವರ್ಗ - II (ಎ) | - | 1 | - | - | - | - | - | 1 |
| ಪ್ರವರ್ಗ - III (ಎ) | 1 | - | - | - | - | - | - | 1 |
| ಸಾಮಾನ್ಯ ವರ್ಗ | - | - | 1 | - | - | - | - | 1 |
| ಒಟ್ಟು | 2 | 1 | 2 | - | - | - | - | 5 |

1) ಶೈಕ್ಷಣಿಕ ವಿದ್ಯಾರ್ಹತೆ

1) ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿಯ ಕಮರ್ಷಿಯಲ್ಲಿ ಪ್ರಾಕ್ಟೀಸ್ 3 ವರ್ಷಗಳ ಡಿಪ್ಲೋಮಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

2) ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸುವ ಕನ್ನಡ ಮತ್ತು ಆಂಗ್ಲ ಭಾಷೆಯ ಹಿರಿಯ ದರ್ಜೆ (Senior Grade) ಬೆರಳಚ್ಚು ವಿಷಯಗಳಲ್ಲಿ ತೇರ್ಗಡೆ ಹೊಂದಿರಬೇಕು.

3) ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸುವ ಕನ್ನಡ ಮತ್ತು ಆಂಗ್ಲ ಭಾಷೆಯ ಹಿರಿಯ ದರ್ಜೆ (Senior Grade) ಶೀಘ್ರಲಿಪಿ ವಿಷಯಗಳಲ್ಲಿ ತೇರ್ಗಡೆ ಹೊಂದಿರಬೇಕು.

4) ಕಂಪ್ಯೂಟರ್‌ನಲ್ಲಿ ಕನ್ನಡ ಮತ್ತು ಇಂಗ್ಲೀಷ್ ಬೆರಳಚ್ಚು ಮಾಡುವ ಜ್ಞಾನವು ಅವಶ್ಯವಾಗಿರುತ್ತದೆ.

**ಅರ್ಹತಾ ಪರೀಕ್ಷೆ:**

1) ಅಭ್ಯರ್ಥಿಗಳಿಗೆ ಇಂಗ್ಲೀಷ್ ಭಾಷೆಯಲ್ಲಿ ಒಂದು ನಿಮಿಷಕ್ಕೆ 120 ಪದಗಳ ವೇಗದಲ್ಲಿ 5 ನಿಮಿಷಗಳ ಉಕ್ತಲೇಖನ ನೀಡಲಾಗುವುದು ಅದನ್ನು ಬೆರಳಚ್ಚು ಯಂತ್ರ/ಕಂಪ್ಯೂಟರ್ ಮೇಲೆ 45 ನಿಮಿಷದಲ್ಲಿ ಲಿಪ್ಯಂತರ ಮಾಡಬೇಕು.

2) ಅಭ್ಯರ್ಥಿಗಳಿಗೆ ಕನ್ನಡದಲ್ಲಿ ಒಂದು ನಿಮಿಷಕ್ಕೆ 260 ಅಕ್ಷರಗಳ ವೇಗದಲ್ಲಿ 5 ನಿಮಿಷಗಳ ಉಕ್ತಲೇಖನ ನೀಡಲಾಗುವುದು ಅದನ್ನು ಬೆರಳಚ್ಚು ಯಂತ್ರ/ಕಂಪ್ಯೂಟರ್ ಮೇಲೆ 45 ನಿಮಿಷದಲ್ಲಿ ಲಿಪ್ಯಂತರ ಮಾಡಬೇಕು.

## II. ಹುದ್ದೆಯ ಪದನಾಮ : ಬೆರಳಚ್ಚುಗಾರರ ಖಾಲಿ ಹುದ್ದೆಗಳ ಸಂಖ್ಯೆ : 01

ವೇತನ ಶ್ರೇಣಿ : 21400-500-22400-550-24600-600-27000-650-29600 -750-32600-850-36000-950-39800-1100-42000 ಮತ್ತು ಇತರೆ ಭತ್ಯೆಗಳು.

ಹೈದರಾಬಾದ್-ಕರ್ನಾಟಕ ಸ್ಥಳೀಯ ವೃಂದಕ್ಕೆ ಹುದ್ದೆಗಳ ವರ್ಗೀಕರಣ

Hyderabad Karnataka Local Cadre)

| ವರ್ಗೀಕರಣ | ಇತರೆ | ಮಹಿಳೆ | ಗ್ರಾಮೀಣ | ಅಂಗವಿಕಲ | ಕನ್ನಡ ಮಾಧ್ಯಮ | ಮಾಜಿ ಸೈನಿಕ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|---|
| ಸಾಮಾನ್ಯ ವರ್ಗ | - | - | | - | - | 01 | - | 1 |
| ಒಟ್ಟು | - | - | - | - | - | 01 | - | 1 |

**1) ಶೈಕ್ಷಣಿಕ ವಿದ್ಯಾರ್ಹತೆ**

1) ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿಯ ಕಮರ್ಷಿಯಲ್ಲಿ ಪ್ರಾಕ್ಟಿಸ್ 3 ವರ್ಷಗಳ ಡಿಪ್ಲೋಮಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

2) ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸುವ ಕನ್ನಡ ಮತ್ತು ಆಂಗ್ಲ ಭಾಷೆಯ ಹಿರಿಯ ದರ್ಜೆ (Senior Grade) ಬೆರಳಚ್ಚು ವಿಷಯಗಳಲ್ಲಿ ತೇರ್ಗಡೆ ಹೊಂದಿರಬೇಕು.

3) ಕಂಪ್ಯೂಟರ್‌ನಲ್ಲಿ ಕನ್ನಡ ಮತ್ತು ಇಂಗ್ಲೀಷ್ ಬೆರಳಚ್ಚು ಮಾಡುವ ಜ್ಞಾನವು ಅವಶ್ಯವಾಗಿರುತ್ತದೆ.

**ಅರ್ಹತಾ ಪರೀಕ್ಷೆ:**

1) ಅಭ್ಯರ್ಥಿಗಳಿಗೆ 10 ನಿಮಿಷಗಳ ಅವಧಿಯಂತೆ ಕನ್ನಡ ಮತ್ತು ಇಂಗ್ಲೀಷ್ ಭಾಷೆಗಳಲ್ಲಿ ಬೆರಳಚ್ಚು ಯಂತ್ರ / ಕಂಪ್ಯೂಟರ್ ಮೇಲೆ ಬೆರಳಚ್ಚು ಮಾಡಲು ಉಕ್ತಲೇಖನ ನೀಡಲಾಗುವುದು.

**ವಯೋಮಿತಿ :**

1) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

2) ಗರಿಷ್ಟ ವಯೋಮಿತಿ :

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| 2ಎ, 2ಬಿ, 3ಎ, 3ಬಿ, | 38 ವರ್ಷ |
| ಪ.ಜಾ / ಪ.ಪಂ / ಪ್ರ- 1 | 40 ವರ್ಷ |

1) ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ, ಅಂಗವಿಕಲರಿಗೆ, ಪ.ಜಾ / ಪ.ಪಂ / ಪ್ರ- 1, 2ಎ, 2ಬಿ, 3ಎ, 3ಬಿ, ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು (ಈ ಬಗ್ಗೆ ಮೀಸಲಾತಿ ಕೋರಿದಲ್ಲಿ ಪ್ರಮಾಣಪತ್ರ ಸಲ್ಲಿಸಬೇಕು)

**ಪರಿವೀಕ್ಷಣಾ ಅವಧಿ:**

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 2 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಇಲಾಖಾ, ಕಂಪ್ಯೂಟರ್ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

**ಆಯ್ಕೆಯಾದ ಅಭ್ಯರ್ಥಿಗಳು ನೂತನ ಪಿಂಚಣಿ ಯೋಜನೆಗೆ ಒಳಪಡುತ್ತಾರೆ.**

**ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನ:**

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸುವ ಸಮಯದಲ್ಲಿ ಸಂಬಂಧಪಟ್ಟ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದಿರಬೇಕು.

**ನಿಗದಿತ ಅರ್ಜಿ ಶುಲ್ಕ - ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ:-**

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ-2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ | ರೂ. 200/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ವಿನಾಯಿತಿ ಇರುತ್ತದೆ. |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್

***http://districts.ecourts.gov.in/koppal/online-recruitment***

**OR**

http://karnatakajudiciary.kar.nic.in/districtrecruitment.php ನಲ್ಲಿ ನೀಡಲಾದ ಲಿಂಕ್ ಮುಖಾಂತರ ಭಾರತೀಯ ಸ್ಟೇಟ್ ಬ್ಯಾಂಕನ ಎಸ್.ಬಿ.ಐ. ಕಲೆಕ್ಟ್ ಮೂಲಕ online payment through net banking / credit card / debit card ಸೌಲಭ್ಯದ ಮೂಲಕ ಅಥವಾ ಚಲನ್ ಮೂಲಕ ಪಾವತಿಸತಕ್ಕದ್ದು. ಚಲನ್ ಪ್ರತಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಿಂದ ಪ್ರಿಂಟ್ ಮಾಡಿಕೊಳ್ಳತಕ್ಕದ್ದು. **ಒಮ್ಮೆ ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸುವುದಿಲ್ಲ.** ಇದನ್ನು ಹೊರತುಪಡಿಸಿ ಯಾವುದೇ ಡಿಮಾಂಡ್ ಡ್ರಾಫ್ಟ್ ಃ ಪೋಸ್ಟಲ್ ಆರ್ಡರ್ ಃಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ಅಭ್ಯರ್ಥಿಗಳು *ON-LINE* ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು ಃ**

1. ಅಭ್ಯರ್ಥಿಗಳು ಅರ್ಜಿಯನ್ನು ON-LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು, ಒಂದು ವೇಳೆ ಅರ್ಜಿ ಸರಿಯಾಗದಿದ್ದಲ್ಲಿ ತಿರಿಸ್ಕರಿಸಲಾಗುವುದು.

2. ಅಭ್ಯರ್ಥಿಯು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ತಮಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರ ಹೊಣೆಯಾಗಿರುವುದಿಲ್ಲ.

3. ಅಭ್ಯರ್ಥಿಯು ಇತ್ತೀಚಿನ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.
   ಅ) ಬಣ್ಣದ ಭಾವಚಿತ್ರವು ಇತ್ತೀಚಿನದಾಗಿದ್ದು, ಅಳತೆಯಲ್ಲಿ 5cm ಉದ್ದ x 3.6cm ಅಗಲವುಳ್ಳದ್ದಾಗಿರಬೇಕು ಮತ್ತು 50 ಕೆಬಿ ಅಳತೆಯದ್ದಾಗಿರಬೇಕು ಹಾಗೂ ಅದು .jpg

ಬ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿಬಣ್ಣದ್ದಾಗಿರಬೇಕು.

ಕ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5cm ಉದ್ದ x 7.5cm ಅಗಲವುಳ್ಳದ್ದಾಗಿರಬೇಕು ಮತ್ತು 26 ಕೆಬಿ ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು) ಅಪ್‌ಲೋಡ್ ಮಾಡಬೇಕು.

4. ತದನಂತರ ಅಭ್ಯರ್ಥಿಯು ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು download ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ ಸಮಯದಲ್ಲಿ ಹಾಜರು ಪಡಿಸತಕ್ಕದ್ದು.

5. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ, ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ.

6. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್ ***http://districts.ecourts.gov.in/koppal/online-recruitment***

**OR**

http://karnatakajudiciary.kar.nic.in/districtrecruitment.php ನಲ್ಲಿ **ದಿನಾಂಕಃ *01-04-2022* ರಿಂದ *21-04-2022*** ರ ರಾತ್ರಿ 11-59ರ ವರೆಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಮತ್ತು

ಶುಲ್ಕವನ್ನು ಚಲನ್ ಮುಖಾಂತರ ಪಾವತಿಸಲು ***22-04-2022*** ರ ಕಡೆಯ ದಿನಾಂಕವಾಗಿದ್ದು, ಅದರೊಳಗೆ ಭಾರತೀಯ ಸ್ಟೇಟ್ ಬ್ಯಾಂಕ್ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.

7. ಅರ್ಹ ಅಭ್ಯರ್ಥಿಗಳಿಗೆ SMS ಹಾಗೂ ಇ-ಮೇಲ್ ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಹಾಗೂ ಅಭ್ಯರ್ಥಿಯು ಸದರಿ ಪಟ್ಟಿಯನ್ನು ಡೌನಲೋಡ್ ಮಾಡಿಕೊಂಡು ಸಂದರ್ಶನಕ್ಕೆ ಹಾಜರಾಗುವಾಗ ತಪ್ಪದೇ ಹಾಜರುಪಡಿಸತಕ್ಕದ್ದು.

8. ಅಭ್ಯರ್ಥಿಗಳು ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಗಳಲ್ಲಿ ON-LINE ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿ ಪಡಿಸಿದ ಕೊನೆಯ ದಿನಾಂಕದವರೆಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಕೋರಿರುವ ಮೀಸಲಾತಿ ಪ್ರಮಾಣ ಪತ್ರಗಳು ಮತ್ತು ಇತರೆ ಪ್ರಮಾಣ ಪತ್ರಗಳನ್ನು ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಅವುಗಳ ಮೂಲ ಪ್ರತಿಗಳನ್ನು ಪರಿಶೀಲನೆಯ ಸಮಯದಲ್ಲಿ ಹಾಜರು ಪಡಿಸಬೇಕು. ಇತರೇ ನಮೂನೆಗಳಲ್ಲಿ ಅಥವಾ ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ, ತಪ್ಪಿದ್ದಲ್ಲಿ ಇವರ ಮೀಸಲಾತಿಯನ್ನು/ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

ಅ) ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ಚಲನ್/ವಿವರದ ಪ್ರತಿ.

ಆ) ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್.ಎಸ್.ಎಲ್.ಸಿ ಅಂಕಪಟ್ಟಿ/ವರ್ಗಾವಣೆ ಪಟ್ಟಿ/ ಕ್ಯುಮುಲೇಟೀವ್ ರೆಕಾರ್ಡ್ ದಾಖಲಾತಿಗಳು.

ಇ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ-ಡಿ ಯಲ್ಲಿ ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ-ಇ ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ-ಎಫ್ ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪಡೆದಿರತಕ್ಕದ್ದು.

ಈ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದಿರತಕ್ಕದ್ದು.

ಉ) ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯೊಂದ/ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರವನ್ನು ಸಲ್ಲಿಸುವುದು.

ಊ) ವಿಧವೆಯರು, ಜೀತ ಕಾರ್ಮಿಕರು, ವಯೋಮಿತಿ ರಿಯಾಯ್ತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.

ಎ) ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ.

ಏ) ಹೈದ್ರಾಬಾದ – ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಗಳಿಗಾಗಿ ಅರ್ಜಿ ಸಲ್ಲಿಸುವವರು ಸರಕಾರದ ಅಧಿಸೂಚನೆ ಸಂಖ್ಯೆಃ DPAR/43/HKC/2013 ಬೆಂಗಳೂರು ದಿನಾಂಕಃ 29-01-2014ರಲ್ಲಿ ನಿಗದಿಪಡಿಸಲಾದ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು-2013ರ ನಿಯಮ 3(3)ರಲ್ಲಿ ಗೊತ್ತುಪಡಿಸಿರುವಂತೆ "ಅನುಬಂಧ-ಎ" ಯಲ್ಲಿರುವಂತೆ "ಅರ್ಹತಾ ಪ್ರಮಾಣ ಪತ್ರ" ವನ್ನು ಸಂಬಂಧಪಟ್ಟ ಸಹಾಯಕ ಆಯುಕ್ತರವರಿಂದ ಹಾಗೂ ಸೇವಾನಿರತ ಅಭ್ಯರ್ಥಿಗಳು ಸ್ವಗ್ರಾಮ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರದಿಂದ ಅಧಿಸೂಚನೆಯ ಕೊನೆಯ ದಿನಾಂಕದ ಒಳಗಾಗಿ ಪಡೆದಿರಬೇಕು.

ಐ) ಅರ್ಜಿಯನ್ನು ಕಳುಹಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳ ಒಳಗೆ ಇಬ್ಬರು ಗೌರವಾನ್ವಿತ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣ ಪತ್ರ ಹಾಗೂ ಶಾಲಾ ನಡತೆ ಪ್ರಮಾಣ ಪತ್ರ ಹಾಗೂ ಕೊನೆಯಲ್ಲಿ ವಿದ್ಯಾಭ್ಯಾಸ ಮಾಡಿದ ಶಾಲಾ / ಕಾಲೇಜುಗಳಿಂದ ಪಡೆದ ನಡತೆ ಪ್ರಮಾಣಪತ್ರ ಪಡೆದಿತರಕ್ಕದ್ದು.

ಒ) ನಿರಾಕ್ಷೇಪಣಾ ಪತ್ರ (ಸರಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳಿಗೆ).

9. ಒಂದಕ್ಕಿಂತಾ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಪ್ರತಿ ಹುದ್ದೆಗೆ ಪ್ರತ್ಯೇಕ ಅರ್ಜಿ ಸಲ್ಲಿಸಬೇಕು ಹಾಗೂ ಪ್ರತ್ಯೇಕ ಶುಲ್ಕ ಭರಿಸಬೇಕು.

10. ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಅರ್ಹತಾ ಪರೀಕ್ಷೆ ಮತ್ತು ಸಂದರ್ಶನಕ್ಕೆ ಹಾಜರಾಗುವುದು.

11. ಅಭ್ಯರ್ಥಿಗೆ ಸಂದರ್ಶನಕ್ಕೆ ಹಾಜರಾಗಲು ಮಾಹಿತಿ ಸಿಗದಿದ್ದ ಪಕ್ಷದಲ್ಲಿ ಅವರು ಸಂದರ್ಶನಕ್ಕೆ ಹಾಜರಾಗಲು ಅನರ್ಹರೆಂದು ತಿಳಿಯತಕ್ಕದ್ದು. ಈ ಬಗ್ಗೆ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ.

12. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು ಹಾಗೂ ಅಂಗ ವಿಕಲ ಅಭ್ಯರ್ಥಿಗಳ ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ ಹುದ್ದೆಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು ಮತ್ತು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು ಮುಂದಿನ ನೇಮಕಾತಿಯಲ್ಲಿ ಬ್ಯಾಕ್‌ಲಾಗ್ ಎಂದು ನೇಮಕಾತಿ ಪ್ರಕ್ರಿಯೆ ಮಾಡಲಾಗುವುದು.

13. ಅಭ್ಯರ್ಥಿಗಳು ತಮ್ಮ 10ನೇ ತರಗತಿ ಮತ್ತು ದ್ವಿತೀಯ ಪಿಯುಸಿಯ ಅಂಕಗಳು ಶ್ರೇಣಿಯಲ್ಲಿದ್ದರೆ ಅಥವಾ CGPS ಆಗಿದ್ದರೆ ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಟ ಅಂಕಗಳು, ಪಡೆದ ಅಂಕಗಳು ಮತ್ತು ಒಟ್ಟು ಶೇಕಡಾವಾರನ್ನು ಕಡ್ಡಾಯವಾಗಿ ನಿಗದಿತ ಕಾಲಂನಲ್ಲಿ ನಮೂದಿಸಬೇಕು.

14. ಅಂತಿಮವಾಗಿ ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು

ರದ್ದುಪಡಿಸಲಾಗುವುದು.

15. ಮೇಲ್ಕಾಣಿಸಿದ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂಧರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ. ಪರೀಕ್ಷೋತ್ತರದ ನಂತರದ (ಆಯ್ಕೆ ಪಟ್ಟಿ ಸಿದ್ಧಪಡಿಸುವ ಅವಧಿಯೊಳಗೆ) ಸೃಷ್ಟಿಯಾಗುವ ಹುದ್ದೆಗಳನ್ನೂ ಸಹ ಸೇರ್ಪಡೆ ಅಧಿಸೂಚನೆಯ ಮೂಲಕ ಅಧಿಸೂಚಿಸಲಾಗುವುದು.

01/04/2022

(ಎಲ್. ವಿಜಯಲಕ್ಷ್ಮಿದೇವಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕೊಪ್ಪಳ.

14/02/2022

ಅಧಿಸೂಚನೆಯ ನಕಲನ್ನು
ಮಾನ್ಯ ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ ಪ್ರತ್ಯೇಕ ಪತ್ರದೊಂದಿಗೆ ಅವಗಾಹನೆಗಾಗಿ ಸಲ್ಲಿಸಲಾಗಿದೆ,

ಅಧಿಸೂಚನೆಯ ನಕಲನ್ನು ಈ ಕೆಳಕಂಡವರಿಗೆ ಮಾಹಿತಿಗಾಗಿ ಮತ್ತು ವ್ಯಾಪಕ ಪ್ರಚಾರಕ್ಕಾಗಿ ರವಾನಿಸಲಾಗಿದೆ

1. ಉಪನಿರ್ದೇಶಕರು, ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಕೊಪ್ಪಳ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ ಃ ವಿವಿಧ ಪತ್ರಿಕೆಗಳಲ್ಲಿ ಪ್ರಕಟಿಸುವಂತೆ ಕೋರಿ.
2. ಮಾಹಿತಿ ಮತ್ತು ಪ್ರವಾಸೋದ್ಯಮ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಸಿಟಿ, ಬೆಂಗಳೂರು ಗ್ರಾಮಾಂತರ, ಮೈಸೂರು, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ, ವಿಜಯಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ,ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಢ ಗದಗ, ಹಾಸನ, ಹಾವೇರಿ, ಕೊಡಗು, ಕೋಲಾರ ಕಲಬುರಗಿ, ಮಂಗಳೂರು, ಮಂಡ್ಯ, ರಾಮನಗರ, ರಾಯಚೂರು, ತುಮಕೂರು, ಉಡುಪಿ, ಯಾದಗಿರಿ ಮತ್ತು ಕಾರವಾರ ಇವರಿಗೆ, ನೇಮಕಾತಿ ಅದಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನೆ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ ಮತ್ತು ವಿಲೇಖನಾಧಿಕಾರಿಗಳು ನಗರ ಸಿವಿಲ್ ನ್ಯಾಯಾಲಯ, ಬೆಂಗಳೂರು, ಇವರಿಗೆ, ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನೆ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ.
4. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೊಪ್ಪಳ.
5. ಪ್ರಧಾನ ನ್ಯಾಯಾಧೀಶರು, ಕೌಟುಂಬಿಕ ನ್ಯಾಯಾಲಯ, ಕೊಪ್ಪಳ.
6. ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಕೊಪ್ಪಳ(ಪೀಠ ಗಂಗಾವತಿ) ಗಂಗಾವತಿ.
7. ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಎಫ್‌ಟಿಎಸ್‌ಸಿ-1, ಕೊಪ್ಪಳ.

8. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿಜೆಎಂ ಕೊಪ್ಪಳ.
9. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ಗಂಗಾವತಿ/ಯಲಬುರ್ಗಾ/ಕುಷ್ಟಗಿ.
10. ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ಕೊಪ್ಪಳ/ಕುಷ್ಟಗಿ/ಗಂಗಾವತಿ
11. ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ಯಲಬುರ್ಗಾ.
12. ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ಕೊಪ್ಪಳ/ಕುಷ್ಟಗಿ/ಗಂಗಾವತಿ

ಇವರಿಗೆ ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಲಾಗಿದೆ.